**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 521/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಗಿರೀಶ್ | ಪ್ರಾ.ಸಾಃ 2 |
| ತಂದೆಯ/ಗಂಡನ ಹೆಸರು | : | ಈಶ್ವರಪ್ಪ | ಚಾಸಾಃ 3 |
| ವಯಸ್ಸು | : | 40 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ಗೊಲ್ಲರಹಳ್ಳಿ ಕ್ಯಾಂಪ್ | ದಿಃ06.03.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

1. ಚಾಸಾ.2 ರವರು ಗೊತ್ತು. ಚಾಸಾ.2 ರವರು ಒಂದು ವರ್ಷದ ಹಿಂದೆ ಮೃತಪಟ್ಟಿರುತ್ತಾರೆ. ಚಾಸಾ.5 ರವರು ಗೊತ್ತು. ಸಾಕ್ಷಿ ಮಹಜರಿನಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಮ್ಮ ಗ್ರಾಮದಲ್ಲಿ ಗಲಾಟೆಯ ಕುರಿತು ಪೊಲೀಸರು ಬಂದಿದ್ದಾಗ ಮಾಡಿರುತ್ತೇನೆ. ಸದರಿ ಸಹಿಯನ್ನು ದಿ.08.08.2023 ರಂದು ಮಾಡಿರುತ್ತೇನೆ. ಪೊಲೀಸರು ಸ್ಥಳದಲ್ಲಿ ಮಹಜರನ್ನು ಮಾಡಿದ್ದು, ನನ್ನ ಸಹಿ ಪಡೆದುಕೊಂಡರು. ನಂತರ ಸದರಿ ಸ್ಥಳದಲ್ಲಿ ಛಾಯಾಚಿತ್ರವನ್ನು ತೆಗೆದರು. ಮಹಜರಿನ ಸಮಯದಲ್ಲಿ ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ, ಸದರಿ ಸಮಯದಲ್ಲಿ ನನ್ನೊಂದಿಗೆ ಮೃತ ಚಾಸಾ.2 ಮತ್ತು ಚಾಸಾ5 ರವರು ಇದ್ದರು. ಪೊಲೀಸರಿಗೆ ಚಾಸಾ.5 ರವರು ಸ್ಥಳವನ್ನು ತೋರಿಸಿರುತ್ತಾರೆ. ಸಾಕ್ಷಿ ಮಹಜರಿನ ಸಮಯದಲ್ಲಿ ತೆಗೆದ ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಛಾಯಾಚಿತ್ರವನ್ನು ನಿಪಿ.3 ಎಂದು, ಸಿ.ಡಿ. ಯನ್ನು ನಿಪಿ.4 ಎಂದು ಗುರುತಿಸಲಾಯಿತು. ಮಹಜರಿನ ಪೂರ್ವದಲ್ಲಿ ತನಿಖಾಧಿಕಾರಿಗಳು ಮಹಜರಿಗೆ ಸಹಕರಿಸುವಂತೆ ನೀಡಿದ ನೋಟೀಸಿನಲ್ಲಿನ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ನಿಪಿ.5 ಎಂದು, ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. ಮಹಜರಿನ ಸಮಯದಲ್ಲಿ ಪೊಲೀಸರು ನನ್ನ ಸಮಕ್ಷಮದಲ್ಲಿ ಮು.ಮಾ.1 ರ ತೆಂಗಿನ ಮಟ್ಟೆಯನ್ನು ಅಮಾನತ್ತುಪಡಿಸಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮದಲ್ಲಿ ಮು.ಮಾ.1 ನ್ನು ಅಮಾನತ್ತುಪಡಿಸಿಕೊಂಡಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಸಿ.ಒ.ಎಂ. ವಕೀಲರಿಂದ.**

3. ಮಹಜರಿನಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರು ಮಹಜರಿನಲ್ಲಿ ಬರೆದಿರುವ ವಿಚಾರಗಳ ಕುರಿತು ನನಗೆ ಓದಿ ಹೇಳಿಲ್ಲ. ನೋಟೀಸನ್ನು ಪೊಲೀಸರು ಯಾವ ಉದ್ದೇಶಕ್ಕಾಗಿ ನೀಡಿದ್ದರು ಎಂದು ನನಗೆ ಗೊತ್ತಿಲ್ಲ. ಛಾಯಾಚಿತ್ರವನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂದು ನನಗೆ ಗೊತ್ತಿಲ್ಲ. ಮಹಜರಿನ ಸ್ಥಳದ ಚೆಕ್ಕುಬಂದಿ ಗೊತ್ತಿಲ್ಲ. ನನಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಕೂಡ, ಮಹಜರನ್ನು ಜರುಗಿಸಿರುತ್ತಾರೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ